# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1144

2 ಸದಸ್ಯರ ಹೆಸರು : ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು)

3 ಉತ್ತರಿಸುವ ದಿನಾಂಕ : 20-12-2018

4 ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| ಅ) 2016-17ನೇ ಮತ್ತು 2017-18ರಲ್ಲಿ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಗೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ: ಈ ಅನುದಾನದಿಂದ ಕಾರ್ಯಗತಗೊಳಿಸಿದ ಯೋಜನೆಗಳು ಯಾವುವು: ಅನುದಾನವನ್ನು ಯಾವ ಮಾನದಂಡದಲ್ಲಿ ಹಂಚಲಾಗಿದೆ: (ವಿವರ ಒದಗಿಸುವುದು) | ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಗೆ 2016-17ರಲ್ಲಿ ರೂ.5000.00 ಲಕ್ಷ ಮತ್ತು 2017-18ರಲ್ಲಿ ರೂ.4600.00 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಈ ಅನುದಾನದಲ್ಲಿ ಆರ್ಥಿಕ ದುರ್ಬಲರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಕಾಂಕ್ರೀಟ್ ರಸ್ತೆಗಳ ನಿರ್ಮಾಣ, ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ, ಮೇಲು ಸೇತುವೆ, ತೂಗು ಸೇತುವೆ, ಕಾಲುಸಂಕ, ಸಮುದಾಯ ಭವನ, ಶಾಲಾ ಕಟ್ಟಡ, ಅಂಗನವಾಡಿ ಕಟ್ಟಡ ನಿರ್ಮಾಣದಂತಹ ಉಪಯುಕ್ತ ಕಾಮಗಾರಿಗಳನ್ನು ಕಾರ್ಯಗತಗೊಳಿಸಲಾಗುತ್ತಿದೆ.<br>ಮಂಡಳಿ ವ್ಯಾಪ್ತಿಯ ಚುನಾಯಿತ ವಿಧಾನಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಂದ ಕಾಮಗಾರಿ ಪ್ರಸ್ತಾವನೆಯನ್ನು ಪಡೆಯಲಾಗುವುದು, ಮಂಡಳಿಯ ಅಧಿನಿಯಮ 1991 ಮತ್ತು ನಿಯಮಗಳು 1993ರ ಅಧ್ಯಾಯ-3 ರನ್ವಯ ಮಂಡಳಿ ವ್ಯಾಪ್ತಿಯ ಪ್ರದೇಶ ಅಭಿವೃದ್ಧಿಗಾಗಿ ಪ್ರತಿ ವರ್ಷವೂ ಒಂದು ವಾರ್ಷಿಕ ಯೋಜನೆಯನ್ನು ಸಿದ್ದಪಡಿಸಿ, ಸರ್ಕಾರದ ಅನುಮೋದನೆ ಪಡೆದು ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳನ್ನು ಕಾರ್ಯರೂಪಕ್ಕೆ ತರುವ ಮಾನದಂಡವನ್ನು ಅನುಸರಿಸಲಾಗುತ್ತಿದೆ. |
| ಆ) ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ನಾಮನಿರ್ದೇಶಿತ ವಿಧಾನ ಪರಿಷತ್ ಸದಸ್ಯರಿಗೆ ಅನುದಾನ / ಕಾಮಗಾರಿಯನ್ನು ನೀಡದ ಬಗ್ಗೆ ಮಂಡಳಿಯ ಕಾರ್ಯದರ್ಶಿಯ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ (ವಿವರ ಒದಗಿಸುವುದು) | -ಇಲ್ಲ- |

| | |
|---|---|
| ಇ) ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಿಧಾನ ಪರಿಷತ್ ಸದಸ್ಯರ ಕಾರ್ಯವ್ಯಾಪ್ತಿಯ ಜಿಲ್ಲೆ ಮತ್ತು ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದರೂ, ಆ ಭಾಗದ ಅಭಿವೃದ್ಧಿಗೆ ಅನುದಾನ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ. ಈ ಬಗ್ಗೆ ಸರ್ಕಾರದ ನಿಲುವೇನು? (ವಿವರ ಒದಗಿಸುವುದ) | ಹೌದು, ಈ ಬಗ್ಗೆ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧಿನಿಯಮ, 1991ರ ಸೆಕ್ಷನ್-3(3)ರ ಪ್ರಕಾರ ಮಂಡಳಿಗೆ ಯಾರು ಸದಸ್ಯರಾಗಬಹುದು ಎಂಬುದರ ಬಗ್ಗೆ ನಿರ್ದೇಶನ ಇದೆ. ಅದರಂತೆ,<br>ಎ) ಮಲೆನಾಡು ಪ್ರದೇಶವನ್ನು ಭಾಗಶ: ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು.<br>ಬಿ) ಮಲೆನಾಡು ಪ್ರದೇಶದ ಮೇಲೆ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರು.<br>ಸಿ) ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿತರಾದ ಹತ್ತು ಮಂದಿಯನ್ನು ಮೀರದ ಸದಸ್ಯರು, ಅವರ ಪೈಕಿ ಇಬ್ಬರು ಅನುಸೂಚಿತ ಜಾತಿಗಳು ಮತ್ತು ಒಬ್ಬರು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳಾಗಿರತಕ್ಕದ್ದು.<br>ಡಿ) ಮಂಡಳಿಯ ಕಾರ್ಯದರ್ಶಿ; ಮತ್ತು<br>ಇ) ಮಲೆನಾಡು ಪ್ರದೇಶದಲ್ಲಿರುವ ಪ್ರತಿಯೊಂದು ಜಿಲ್ಲೆಯ ಡೆಪ್ಯುಟಿ ಕಮಿಷನರು.,<br>ಸೆಕ್ಷನ್ 4ರನ್ವಯ ರಾಜ್ಯ ಸರ್ಕಾರವು ಸದಸ್ಯರ ಪೈಕಿ ಒಬ್ಬರನ್ನು ಮಂಡಳಿಯ ಅಧ್ಯಕ್ಷರನ್ನಾಗಿ ನೇಮಿಸುವುದು.<br>ಮಂಡಳಿಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ನಾಮನಿರ್ದೇಶಿತ ವಿಧಾನ ಪರಿಷತ್ ಸದಸ್ಯರು ಮಂಡಳಿಯ ಸದಸ್ಯರಿರುವುದಿಲ್ಲ. ಈ ಕಾರಣದಿಂದ ಮಂಡಳಿಯ ಅನುದಾನವನ್ನು ಅವರಿಗೆ ನೀಡಲು ಅವಕಾಶವಿರುವುದಿಲ್ಲ. |

ಸಂಖ್ಯೆ:ಯೋಇ 61 ಮಪ್ರಮಂ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ